# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ಹೇರೋಹಳ್ಳಿ ಉಪ-ವಿಭಾಗದ,

ವಾರ್ಡ್ ನಂ 40, ದೊಡ್ಡಬಿದರಕಲ್ಲು, ಕರಿಹೋಬನಹಳ್ಳಿ, ಬೆಂಗಳೂರು-560058

---

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ರಾ.ರಾ.ನಗರ ವಲಯ, ಹೇರೋಹಳ್ಳಿ ಉಪ-ವಿಭಾಗದ ವಾರ್ಡ್ ನಂ.40ರಲ್ಲಿ ದಿನಾಂಕ: 11.11.2021 ರಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.**

**ಈ ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.**

1. ಶ್ರೀ ಸುಬ್ರಮಣ್ಯ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ ಜಿ ನಾಗಭೂಷಣ್, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ.
3. ಶ್ರೀ.ಆನಂದ್ ಸಹಾಯಕ ಕಾರ್ಯ ಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ
4. ಶ್ರೀ ಮುತ್ತೇಗೌಡ, ಕಿರಿಯ ಆರೋಗ್ಯ ಪರಿವೀಕ್ಷಕರು.
5. ಶ್ರೀ ಎಂ ಅಮರನಾಥ್, ಸಹಾಯಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ.

**ವಾರ್ಡ್ ಸಮಿತಿ ಸದಸ್ಯರುಗಳು.**

1. ಶ್ರೀ.ಮಾಲತೇಶ್, ದೊಡ್ಡಬಿದರಕಲ್ಲು, ಸದಸ್ಯರು.
2. ಶ್ರೀ.ಮಂಜುನಾಥ್, ಚನ್ನನಾಯಕನಪಾಳ್ಯ, ಸದಸ್ಯರು.
3. ಶ್ರೀ.ನಟರಾಜ್, ತಿಳಗರಪಾಳ್ಯ, ಸದಸ್ಯರು.
4. ಶ್ರೀಮತಿ.ಮಂಗಳಮ್ಮ, ಮಾರಣ್ಣ ಬಡಾವಣೆ, ಸದಸ್ಯರು.
5. ಶ್ರೀಮತಿ.ಸುಮಿತ್ರಮ್ಮ, ಅಂದ್ರಹಳ್ಳಿ, ಸದಸ್ಯರು.
6. ಶ್ರೀಮತಿ ಪುಟ್ಟಮ್ಮ, ತಿಗಳರಪಾಳ್ಯ, ಸದಸ್ಯರು.

**ಈ ಕೆಳಕಂಡ ಅಧಿಕಾರಿಗಳು ಸಭೆಯಲ್ಲಿ ಗೈರು ಹಾಜರಾಗಿರುತ್ತಾರೆ.**

1. ಶ್ರೀ.ರಮೇಶ್, ಪಶು ವೈದ್ಯರು.
2. ಶ್ರೀ.ರಂಗಸ್ವಾಮಿ, ಅರಣ್ಯ ಇಲಾಖೆ.
3. ಶ್ರೀ.ಹೆಚ್.ಡಿ.ವೆಂಕಟೇಶ್, ತೋಟಗಾರಿಕೆ ಪರಿವೀಕ್ಷಕರು.
4. ಶ್ರೀಮತಿ ಮೇಘನಾ.ಬಿ.ಕೆ, ಸಹಾಯಕ ಅಭಿಯಂತರರು, ಕೆರೆಗಳ ವಿಭಾಗ, ರಾ.ರಾ.ನಗರ.ವಲಯ.
5. ಶ್ರೀಮತಿ ಲಕ್ಷ್ಮಿ ಕೆ ಆರ್, **SWM Plant** ಅಧಿಕಾರಿಗಳು.
6. ಶ್ರೀ.ಬೆಟ್ಟಸ್ವಾಮಯ್ಯ, ಎ.ಎಸ್.ಐ, ಬ್ಯಾಡರಹಳ್ಳಿ ಪೊಲೀಸ್ ಠಾಣೆ.
7. ಶ್ರೀ.ಗುರುರಾಜ್ ಪೂಜಾರಿ, ಅಸ್ಸೆಸರ್, ಕಂದಾಯ ಇಲಾಖೆ, ದೊಡ್ಡಬಿದರಕಲ್ಲು.

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1) **ವಾರ್ಡ್ ವ್ಯಾಪ್ತಿಯಲ್ಲಿನ ಆರೋಗ್ಯ ಇಲಾಖೆ ಬಗ್ಗೆ ಚರ್ಚಿಸಲಾದ ವಿಚಾರ.**

- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಪ್ರಕರಣಗಳು ತುಂಬಾ ಕಡಿಮೆಯಾಗಿದ್ದು, ಮಾರ್ಷಲ್‌ಗಳು ಹಗಲು/ರಾತ್ರಿ ಪಾಳಯದಲ್ಲಿ ಮಾಸ್ಕ್ ಧರಿಸದೇ ಇರುವ ಸಾರ್ವಜನಿಕರಿಗೆ ದಂಡ ವಿಧಿಸುವ ಕಾರ್ಯ ನಿರ್ವಹಿಸುತ್ತಿರುತ್ತಾರೆ. ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿದರು.
- ಸದಸ್ಯರಾದ ಶ್ರೀಮತಿ.ಮಂಗಳಮ್ಮ ರವರು ಮಾತನಾಡಿ ತಿಪ್ಪೇನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮೋಜು, ಮಸ್ತಿ ಇತರೆ ಚಟುವಟಿಕೆಗಳನ್ನು ಮಾಡುತ್ತಿದ್ದಾರೆ ಎಂದು ಸಭೆಯಲ್ಲಿ ತಿಳಿಸಿದರು. ನಂತರ ನೋಡಲ್ ಅಧಿಕಾರಿಗಳು ಮಾತನಾಡಿ ಸಂಬಂಧಪಟ್ಟ ಆರೋಗ್ಯಾಧಿಕಾರಿಗಳಿಗೆ ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಾಗುವಂತೆ ತಿಳಿಸಲು ಸೂಚಿಸಿದರು.

- ಹಿರಿಯ ಆರೋಗ್ಯ ಪರಿವೀಕ್ಷಕರಾದ ಮುತ್ತೇಗೌಡ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಹಾಗೂ ಪೌರ ಕಾರ್ಮಿಕರ ಅನುಕೂಲಕ್ಕಾಗಿ 20 ಇ-ಶೌಚಾಲಯಗಳ ಅಗತ್ಯವಿದ್ದು, ಈ ಕೆಳಕಂಡ ಸ್ಥಳಗಳನ್ನು ಗುರುತಿಸಿದ್ದು, ಈ ಕೆಳಕಂಡ ಸ್ಥಳಗಳಲ್ಲಿ ಇ-ಶೌಚಾಲಯಗಳನ್ನು ನಿರ್ಮಿಸಲು **'ಜನಾಗ್ರಹ'** ಸಂಸ್ಥೆ ರವರಿಗೆ ಪತ್ರ ಬರೆಯಲು ತಿಳಿಸಿದರು.

    1. ತಿಪ್ಪೇನಹಳ್ಳಿ ಸರ್ಕಾರಿ ಶಾಲೆ - 02
    2. ತಿಗಳರಪಾಳ್ಯ ವೃತ್ತ - 02
    3. ಅಂದ್ರಹಳ್ಳಿ ವಾಟರ್ ಟ್ಯಾಂಕ್ ಹತ್ತಿರ - 02
    4. ಕೋಡಿಮುನೇಶ್ವರ ದೇವಸ್ಥಾನದ ಹತ್ತಿರ - 02
    5. ಗೊಲ್ಲರ ಹಟ್ಟಿ ಕಾಲೇಜ್ ಸ್ಟಾಪ್ - 02
    6. ಕರಿಹೋಬನಹಳ್ಳಿ ಬಿ.ಬಿ.ಎಂ.ಪಿ ಕಛೇರಿ ಹತ್ತಿರ - 02
    7. ಡಿ-ಗ್ರೂಪ್ ಬಡಾವಣೆ ಬಸ್ ತಂಗುದಾಣ - 02
    8. ವಿದ್ಯಾಮಾನ್ಯ ನಗರ ಬಸ್ ತಂಗುದಾಣ - 02
    9. ಸುವರ್ಣ ನಗರ ಬಸ್ ತಂಗುದಾಣ - 02
    10. ತಿಗಳರಪಾಳ್ಯ ಬಸ್ ತಂಗುದಾಣ - 02

**2) ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ಸದಸ್ಯರಾದ ಶ್ರೀಮತಿ.ಮಂಗಳಮ್ಮ ರವರು ಮಾತನಾಡಿ ಮಾರಣ್ಣ ಬಡಾವಣೆಯ ರಸ್ತೆ & ಚರಂಡಿ ಅಭಿವೃದ್ಧಿ ಮಾಡಬೇಕೆಂದು ಮನವಿ ಮಾಡಿದರು. ನಂತರ ನೋಡಲ್ ಅಧಿಕಾರಿಗಳು ಮಾತನಾಡಿ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಸಹಾಯಕ ಅಭಿಯಂತರರಿಗೆ ಸೂಚಿಸಿದರು.
- ವಾರ್ಡ್ ಸಹಾಯಕ ಅಭಿಯಂತರರಾದ ಶ್ರೀ.ನಾಗಭೂಷಣ್ ರವರು ಮಾತನಾಡಿ ಮಾನ್ಯ ಉಚ್ಛ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 41517/2019 ರ ಅನ್ವಯ ಮಾನ್ಯ ಮುಖ್ಯ ಆಯುಕ್ತರು ನೀಡಿರುವ ನಿರ್ದೇಶನದ ಮೇರೆಗೆ ವಾರ್ಡ್ ವ್ಯಾಪ್ತಿಯಲ್ಲಿನ ಎಲ್ಲ ಕಟ್ಟಡಗಳ ದಾಖಲೆಗಳನ್ನು ಹಾಜರುಪಡಿಸುವ ಬಗ್ಗೆ ನೋಟೀಸ್ ನೀಡಲಾಗುತ್ತಿದೆ ಎಂದು ಸಭೆಯಲ್ಲಿ ಉಪಸ್ಥಿತರಿರುವ ಎಲ್ಲ ಸದಸ್ಯರುಗಳಿಗೆ ತಿಳಿಸಿದರು.

**3) ವಾರ್ಡ್ ವ್ಯಾಪ್ತಿಯಲ್ಲಿನ ಮಳೆ ನೀರುಗಾಲುವೆ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ಸದಸ್ಯರಾದ ಶ್ರೀಮತಿ.ಮಂಗಳಮ್ಮ ರವರು ಮಾತನಾಡಿ ಮಾರಣ್ಣ ಬಡಾವಣೆಯಿಂದ ಸಿದ್ಧಾರ್ಥ ಸ್ಕೂಲ್ ಗೆ ತಲುಪುವ ರಸ್ತೆಯ ಮಧ್ಯದಲ್ಲಿ ರಾಜಕಾಲುವೆ ಹಾದುಹೋಗಿದ್ದು, ಅದಕ್ಕೆ ಒಂದು ಕಲ್ವರ್ಟ್ ಅವಶ್ಯಕತೆ ಇದೆ ಎಂದು ಮನವಿ ಮಾಡಿದರು. ಅದಕ್ಕೆ ನೋಡಲ್ ಅಧಿಕಾರಿಗಳು ಮಾತನಾಡಿ ಸಂಬಂಧಪಟ್ಟ ಸಹಾಯಕ ಅಭಿಯಂತರರಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

**4) ವಾರ್ಡ್ ವ್ಯಾಪ್ತಿಯಲ್ಲಿನ ಬಿಬಿಎಂಪಿ ವಿದ್ಯುತ್ ಇಲಾಖೆ ಬಗ್ಗೆ ಚರ್ಚಿಸಲಾದ ವಿಷಯಗಳು**

- ಸದಸ್ಯರಾದ ಶ್ರೀ ಮಾಲತೇಶ್ ರವರು ಮಾತನಾಡಿ ರಾಜೀವ್ ಗಾಂಧಿ ನಗರದ ಹತ್ತಿರ ವಿದ್ಯುತ್ ಕಂಬಗಳು ರಸ್ತೆಯಲ್ಲಿದ್ದು ಅವುಗಳನ್ನು ಸ್ಥಳಾಂತರಿಸಬೇಕೆಂದು ತಿಳಿಸಿದರು. ನಂತರ ನೋಡಲ್ ಅಧಿಕಾರಿಗಳು ಮಾತನಾಡಿ ಸಂಬಂಧಪಟ್ಟ ಬೆಸ್ಕಾಂ ಅಭಿಯಂತರರಿಗೆ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಹಾಗೂ ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಾಗಲು ಪತ್ರ ಬರೆಯುವಂತೆ ಸೂಚಿಸಿದರು.

**5) ವಾರ್ಡ್ ವ್ಯಾಪ್ತಿಯಲ್ಲಿನ ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಗ್ಗೆ ಚರ್ಚಿಸಲಾದ ವಿಷಯಗಳು**

- ಸದಸ್ಯರಾದ ಶ್ರೀ.ಮಂಜುನಾಥ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿನ ಭವಾನಿನಗರದಲ್ಲಿ ಎಲ್ & ಟಿ ರವರು ಒಳಚರಂಡಿ ಕಾಮಗಾರಿಯನ್ನು ಅರ್ಧಕ್ಕೆ ನಿಲ್ಲಿಸಿದ್ದಾರೆ ಎಂದು ತಿಳಿಸಿದರು. ನಂತರ ನೋಡಲ್ ಅಧಿಕಾರಿಗಳು ಮಾತನಾಡಿ ಸಂಬಂಧಪಟ್ಟ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರಿಗೆ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಿದರು.

**6) ವಾರ್ಡ್ ವ್ಯಾಪ್ತಿಯಲ್ಲಿನ ಕೆರೆಗಳ ವಿಭಾಗದ ಬಗ್ಗೆ ಚರ್ಚಿಸಲಾದ ವಿಷಯಗಳು**

- ಸದಸ್ಯರಾದ ಶ್ರೀ.ನಟರಾಜ್ ರವರು ಮಾತನಾಡಿ, ಲಿಂಗಧೀರನಹಳ್ಳಿ ಕೆರೆಯ ಎಸ್.ಟಿ.ಪಿ ಹಾಗೂ ಕೆರೆ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮಾಹಿತಿ ಕೇಳಿದರು. ನಂತರ ನೋಡಲ್ ಅಧಿಕಾರಿಗಳು ಮಾತನಾಡಿ ಮುಂದಿನ ಸಭೆಗೆ ಸಂಬಂಧಪಟ್ಟ ಕೆರೆಗಳ ವಿಭಾಗದ ಅಭಿಯಂತರರಿಗೆ ಕಡ್ಡಾಯವಾಗಿ ಹಾಜರಾಗಲು ತಿಳಿಸುವಂತೆ ಸೂಚಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಶೀಘ್ರ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.40, ದೊಡ್ಡಬಿದರಕಲ್ಲು

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.40, ದೊಡ್ಡಬಿದರಕಲ್ಲು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:-

**<u>ಅಧಿಕಾರಿಗಳ ಮಾಹಿತಿಗಾಗಿ</u>**

1. ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ, ರವರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
3. ಮುಖ್ಯ ಅಭಿಯಂತರರು, ರಾ.ರಾ.ನಗರ ವಲಯ ರವರ ಅವಹಾಹನೆಗಾಗಿ ಮಂಡಿಸಿದೆ.
4. ಉಪ ನಿಯಂತ್ರಕರು (ಹಣಕಾಸು), ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಕೆಂ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೇ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಡಬ್ಲ್ಯೂ.ಡಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ರವರ ಮಾಹಿತಿಗಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ಯೋಜನೆ ರವರ ಮಾಹಿತಿಗಾಗಿ ಕಳುಹಿಸಿದೆ.
12. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
13. ವಲಯ ಅರಣ್ಯಾಧಿಕಾರಿಗಳು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆಗಳು ವಿಭಾಗ ರವರ ಮಾಹಿತಿಗಾಗಿ ಕಳುಹಿಸಿದೆ.
15. ತೋಟಗಾರಿಕೆ ಅಧೀಕ್ಷಕರು, ರಾ.ರಾ.ನಗರ ವಲಯ ರವರ ಮಾಹಿತಿಗಾಗಿ ಕಳುಹಿಸಿದೆ.
16. ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.40, ದೊಡ್ಡಬಿದರಕಲ್ಲು ರವರ ಮಾಹಿತಿಗಾಗಿ ಕಳುಹಿಸಿದೆ.
17. ಪೊಲೀಸ್ ಇನ್ಸ್‌ಪೆಕ್ಟರ್, ಪೀಣ್ಯ/ಬ್ಯಾಡರಹಳ್ಳಿ ರವರ ಮಾಹಿತಿಗಾಗಿ ಕಳುಹಿಸಿದೆ.